# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 585 (675) |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 09.03.2026 |
| ಉತ್ತರಿಸುವವರು | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಇತ್ತೀಚಿನ ದಿನಗಳಲ್ಲಿ ವನ್ಯಜೀವಿಗಳನ್ನು ಬೇಟೆಯಾಡುವ ಪ್ರಕರಣಗಳು ದೇಶದಲ್ಲಿ ಹೆಚ್ಚಾಗುತ್ತಿದ್ದು, ರಾಜ್ಯದಲ್ಲಿಯೂ ಸಹ ಪ್ರಕರಣಗಳು ಬೆಳಕಿಗೆ ಬಂದಿದ್ದು, ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ; (ವಿವರವಾದ ಮಾಹಿತಿ ನೀಡುವುದು)</td><td>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವನ್ಯಜೀವಿ (ರಕ್ಷಣೆ) ಕಾಯ್ದೆ, 1972 ರಡಿಯಲ್ಲಿ ದಾಖಲಾದ ವನ್ಯಜೀವಿ ಅಪರಾಧ ಪ್ರಕರಣಗಳ ವಿವರ ಕೆಳಕಂಡಂತಿದೆ.<br><br>ವರ್ಷ — ಪ್ರಕರಣಗಳ ಸಂಖ್ಯೆ<br>2022-23 — 323<br>2023-24 — 429<br>2024-25 — 388</td></tr>
<tr><td>ಆ)</td><td>ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿಯ ಒಂದು ನದಿಯಲ್ಲಿ ಕೆಲವರು ಭಾರತೀಯ ಕಪ್ಪು ಆಮೆಗಳನ್ನು (Indian Black Turtles) ಧಾರ್ಮಿಕ ಪದ್ಧತಿಗಳನ್ನು ಪೂರ್ಣಗೊಳಿಸಲು ಬೇಟೆಯಾಡುತ್ತಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ;<br><br>ಇ ಬಂದಿದ್ದಲ್ಲಿ, ಇಂತಹ ಸಂರಕ್ಷಿತ ಪ್ರಭೇದ (Protected Species) ಆಗಿರುವ ಆಮೆಗಳನ್ನು ಸಂರಕ್ಷಿಸಲು ಮತ್ತು ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು?</td><td>"ದಿನಾಂಕ: 14-02-2026 ರಂದು ಬೆಳ್ತಂಗಡಿ ಪೊಲೀಸ್ ಠಾಣೆಗೆ ದೊರೆತ ದೂರಿನಂತೆ ಪೊಲೀಸ್ ಉಪ ನಿರೀಕ್ಷಕರು ಮತ್ತು ಸಿಬ್ಬಂದಿಯವರು ಬೆಳ್ತಂಗಡಿ ಪೇಟೆಯ ಸಮೀಪವಿರುವ ಸೋಮಾವತಿ ನದಿಯ ಬದಿಯಲ್ಲಿ 04 ಮಂದಿ ಅಕ್ರಮವಾಗಿ ಆಮೆಗಳನ್ನು ಹಿಡಿದು, ಕೊಂದು ಮಾಂಸ ಮಾರಲು ಪ್ರಯತ್ನಿಸುತ್ತಿದ್ದ ಸಂದರ್ಭದಲ್ಲಿ ಸದರಿಯವರನ್ನು ಹಿಡಿದು ಅವರ ವಶದಲ್ಲಿದ್ದ 04 ಸತ್ತಿರುವ ಆಮೆಗಳನ್ನು ವಶಪಡಿಸಿಕೊಂಡಿರುತ್ತಾರೆ. ಸದರಿ ಪ್ರಕರಣವು ವನ್ಯಜೀವಿ (ರಕ್ಷಣೆ) ಕಾಯ್ದೆ, 1972 ರ ಒಳಪಟ್ಟಿರುವುದರಿಂದ ಸದರಿ ವಶಪಡಿಸಿಕೊಂಡಿದ್ದ 04 ನಿರ್ಜೀವ ಆಮೆಗಳ ಸಮೇತ ಆರೋಪಿತರನ್ನು ಅರಣ್ಯ ಇಲಾಖೆಗೆ ಹಸ್ತಾಂತರ ಮಾಡಿರುತ್ತಾರೆ.<br><br>ಆಮೆಗಳನ್ನು ಬೇಟೆಯಾಡಿರುವ ಆರೋಪಿತರನ್ನು ವಿಚಾರಣೆ ಮಾಡಲಾಗಿ ಸದರಿ ನದಿಯಲ್ಲಿ ಗಾಳ ಹಾಕಿ ಮೀನು ಹಿಡಿಯುತ್ತಿರುವ ಸಂದರ್ಭದಲ್ಲಿ ಆಮೆಗಳು ಗಾಳದಲ್ಲಿ ಸಿಕ್ಕಿರುವುದಾಗಿ ತಿಳಿಸಿ ಹೇಳಿಕೆಯನ್ನು ನೀಡಿರುತ್ತಾರೆ.<br><br>ವಶಪಡಿಸಿಕೊಳ್ಳಲಾದ ಆಮೆಗಳನ್ನು ಪರಿಶೀಲಿಸಲಾಗಿ ಸದರಿ ಆಮೆಗಳು Indian Black Turtle ಆಗಿದ್ದು, ವನ್ಯಜೀವಿ (ರಕ್ಷಣೆ) ಕಾಯಿದೆ 1972 ರ Schedule-II ರಲ್ಲಿ ಸಂರಕ್ಷಿಸಲಾದ ವನ್ಯಪ್ರಾಣಿಯಾಗಿರುತ್ತದೆ. ಆದುದರಿಂದ, ವನ್ಯಜೀವಿ (ರಕ್ಷಣೆ) ಕಾಯಿದೆ, 1972 ರ ಸೆಕ್ಷನ್ 9 r/w ಸೆಕ್ಷನ್ 2(14), 2(16), 39, 51(1) ರ ಪ್ರಕಾರ ಸದರಿ ಆರೋಪಿತರ ವಿರುದ್ಧ ಪ್ರಕರಣ ದಾಖಲಿಸಿಕೊಂಡು</td></tr>
</table>

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | (ವನ್ಯಜೀವಿ ಅಪರಾಧ ಪ್ರಕರಣ ಸಂಖ್ಯೆ: 03/2025-26 ದಿನಾಂಕ 15-02-2026) ಸಂಬಂಧಪಟ್ಟ ಕಾರ್ಯವ್ಯಾಪ್ತಿಯ ನ್ಯಾಯಾಲಯಕ್ಕೆ ವರದಿ ಸಲ್ಲಿಸಲಾಗಿರುತ್ತದೆ. ಮುಂದುವರೆದು, ಪೊಲೀಸ್ ಉಪ ನಿರೀಕ್ಷಕರು ಬಂಧಿಸಿ ಅರಣ್ಯ ಇಲಾಖೆಗೆ ಹಸ್ತಾಂತರಿಸಿದ ಸದರಿ 04 ಮಂದಿ ಆರೋಪಿತರನ್ನು ವಿಚಾರಣೆಯ ಬಳಿಕ ಬಾಂಡ್ ಮೇಲೆ ಬಿಡುಗಡೆಗೊಳಿಸಲಾಗಿರುತ್ತದೆ. ಪ್ರಸ್ತುತ ಪ್ರಕರಣವು ತನಿಖಾ ಹಂತದಲ್ಲಿರುತ್ತದೆ." |

ಸಂಖ್ಯೆ: ಅಪಜೀ 66 ಎಫ್‌ಡಬ್ಲ್ಯೂಎಲ್ 2026

(ಈಶ್ವರ ಬಿ. ಖಂಡ್ರೆ)
ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು